## ಆಡಳಿತ ಬಿಜೆಪಿ ಹಾಗೂ ಪ್ರತಿಪಕ್ಷಗಳಾದ ಕಾಂಗ್ರೆಸ್–ಜೆಡಿಎಸ್ ಮುಖಾಮುಖಿ ಚರ್ಚೆಗೆ ಸದನ ಸಜ್ಜು

# ಇಂದಿನಿಂದ ವಿಧಾನಮಂಡಲ ಜಂಟಿ ಅಧಿವೇಶನ

**ಬೆಂಗಳೂರು:** ಹೊಸ ವರ್ಷದ ಮೊದಲ ವಿಧಾನಮಂಡಲದ ಜಂಟಿ ಅಧಿವೇಶನ ಸೋಮವಾರ ಆರಂಭವಾಗಲಿದ್ದು, ಬೆಳಗ್ಗೆ 11 ಗಂಟೆಗೆ ರಾಜ್ಯಪಾಲ ವಜುಭಾಯಿ ವಾಲಾ ಅವರು ಜಂಟಿ ಸದನ ಉದ್ದೇಶಿಸಿ ಭಾಷಣ ಮಾಡಲಿದ್ದಾರೆ. ರಾಜ್ಯಪಾಲರ ಭಾಷಣ ಮುಗಿದ ನಂತರ ಅಗಲಿದ ಗಣ್ಯರಿಗೆ ಸಂತಾಪ ಸೂಚನೆ ನಡೆಯಲಿದೆ.

ವಿಧಾನಸಭೆಯಲ್ಲಿ ಸರಳ ಬಹುಮತ ಪಡೆದ ಬಳಿಕ ನಡೆಯುತ್ತಿರುವ ಮೊದಲ ಅಧಿವೇಶವನ್ನು ಆತ್ಮವಿಶ್ವಾಸದಿಂದ ಎದುರಿಸಲು ಆಡಳಿತಾರೂಢ ಬಿಜೆಪಿ ಸಜ್ಜಾಗಿದ್ದರೆ, ಪ್ರತಿಪಕ್ಷಗಳಾದ ಕಾಂಗ್ರೆಸ್, ಜೆಡಿಎಸ್ ಕಾರ್ಯತಂತ್ರ ಹೆಣೆದು ಆಡಳಿತ ಪಕ್ಷವನ್ನು ಇಕ್ಕಟ್ಟಿಗೆ ಸಿಲುಕಿಸಲು ಅಣಿಯಾಗಿವೆ. ಕಾಂಗ್ರೆಸ್, ಜೆಡಿಎಸ್ ಸೋಮವಾರ ಶಾಸಕಾಂಗ ಪಕ್ಷದ ಸಭೆ ಕರೆದಿದ್ದು, ವಿಧಾನಮಂಡಲ ಅಧಿವೇಶನ ಎದುರಿಸುವ ವಿಧಾನದ ಬಗ್ಗೆ ಚರ್ಚೆ ನಡೆಸಲಿವೆ.

**ನೂತನ ಸಚಿವರಿಗೆ ಬೆಂಬಲವಾಗಿರಲು ಹಿರಿಯ ಸಚಿವರಿಗೆ ಸೂಚನೆ:** ರಾಜ್ಯದಲ್ಲಿ ಬಿಜೆಪಿ ಸರ್ಕಾರ ರಚನೆಯಾದ ಬಳಿಕ ಕೈಗೊಂಡಿರುವ ಜನಪರ ಕಾರ್ಯಕ್ರಮಗಳು, ಕೊಡುಗೆಗಳನ್ನು ಉಲ್ಲೇಖಿಸುವುದರ ಜತೆಗೆ ಇತ್ತೀಚಿನ ಕೆಲ ಬೆಳವಣಿಗೆ ಬಗ್ಗೆ ಪ್ರತಿಪಕ್ಷಗಳು ಆಕ್ಷೇಪ ವ್ಯಕ್ತಪಡಿಸಿದರೆ, ಅವನ್ನು ಸಮರ್ಥವಾಗಿ ಎದುರಿಸಿ ಪ್ರತ್ಯುತ್ತರ ನೀಡಲು ಬಿಜೆಪಿ ಸಿದ್ಧತೆ ಮಾಡಿಕೊಂಡಿದೆ. ನೂತನ ಸಚಿವರು ಚರ್ಚೆಯಲ್ಲಿ ಪಾಲ್ಗೊಂಡಾಗ ಹಿರಿಯ ಸಚಿವರು ಅವರಿಗೆ ಬೆಂಬಲವಾಗಿರಬೇಕು. ಯಾವುದೇ ರೀತಿಯ ಗೊಂದಲ ಇಲ್ಲವೇ ವ್ಯತ್ಯಯ ಕಂಡು ಬಂದರೆ ಹಿರಿಯ ಸಚಿವರು ನೆರವಿಗೆ ಧಾವಿಸಿ, ಸಮರ್ಥನೆಗೆ ನಿಲ್ಲಬೇಕು ಎಂದು ಹಿರಿಯ ನಾಯಕರು ಸೂಚನೆ ನೀಡಿದ್ದಾರೆ ಎನ್ನಲಾಗಿದೆ.

**ರಾಜ್ಯಪಾಲರ ಭಾಷಣಕ್ಕೂ ಪ್ರತಿರೋಧ?:** ರಾಜ್ಯಪಾಲರು ತಮ್ಮ ಭಾಷಣದಲ್ಲಿ ಸಿಎಎ, ಎನ್‌ಆರ್‌ಸಿ ಇತರ ವಿವಾದಾತ್ಮಕ ವಿಚಾರಗಳ ಬಗ್ಗೆ ಪ್ರಸ್ತಾಪಿಸಿದರೆ ಅದಕ್ಕೆ ಪ್ರತಿರೋಧ ತೋರಲು ಕಾಂಗ್ರೆಸ್ ನಾಯಕರು ಸಜ್ಜಾಗಿದ್ದಾರೆ. ಒಂದೊಮ್ಮೆ ರಾಜ್ಯಪಾಲರು ಯಾವುದೇ ವಿವಾದಾತ್ಮಕ ಅಂಶಗಳನ್ನು ಉಲ್ಲೇಖಿಸದಿದ್ದರೆ ಭಾಷಣಕ್ಕೆ ಯಾವುದೇ ರೀತಿಯಲ್ಲಿ ಅಡ್ಡಿಪಡಿಸದಿರಲು ನಿರ್ಧರಿಸಿದ್ದಾರೆ ಎಂದು ಮೂಲಗಳು ಹೇಳಿವೆ.

ಕಲಾಪ ಸಂದರ್ಭದಲ್ಲಿ ಸಿಎಎ ವಿರುದ್ಧದ ಹೋರಾಟ ಹತ್ತಿಕ್ಕುವ ಪ್ರಯತ್ನ, ಮಂಗಳೂರಿನ ಗೋಲಿಬಾರ್ ಪ್ರಕರಣ, ಬೀದರ್‌ನ ಶಾಹೀನ್ ಶಾಲೆ ಪ್ರಕರಣ, ಹುಬ್ಬಳ್ಳಿಯ ಕೆಎಲ್‌ಇ ಕಾಲೇಜಿನ ವಿದ್ಯಾರ್ಥಿಗಳು ಪಾಕ್ ಪರ ಘೋಷಣೆ ಕೂಗಿದ ಪ್ರಕರಣ, ನೆರೆ ಪರಿಹಾರ ವಿತರಣೆಯಲ್ಲಿ ವ್ಯತ್ಯಯ, ಅರಣ್ಯ ನಿಯಮ ಉಲ್ಲಂಘನೆ ಆರೋಪ ಹೊತ್ತ ಆನಂದ್ ಸಿಂಗ್ ಅವರಿಗೆ ಅರಣ್ಯ ಖಾತೆ ನೀಡಿರುವುದು, ಕೇಂದ್ರದಿಂದ ರಾಜ್ಯಕ್ಕೆ ಅನುದಾನ ನೀಡಿಕೆಯಲ್ಲಿ ತಾರತಮ್ಯ ಸೇರಿದಂತೆ ಹಲವು ವಿಚಾರಗಳನ್ನು ಪ್ರಸ್ತಾಪಿಸಿ ಆಡಳಿತ ಪಕ್ಷದ ವಿರುದ್ಧ ಮುಗಿಬೀಳಲು ಕಾಂಗ್ರೆಸ್, ಜೆಡಿಎಸ್ ಸಜ್ಜಾಗಿವೆ. ಒಟ್ಟಾರೆ ಆಡಳಿತ ಪಕ್ಷ ಹಾಗೂ ಪ್ರತಿಪಕ್ಷಗಳ ಮುಖಾಮುಖಿ ಚರ್ಚೆಗೆ ವಿಧಾನಮಂಡಲ ಸಜ್ಜಾಗಿದ್ದು, ಕುತೂಹಲ ಮೂಡಿದೆ.

### 25 ದಿನದ ಕಲಾಪ

**ವಿಧಾನಮಂಡಲ ಜಂಟಿ ಅಧಿವೇಶನ ಫೆ.17ರಿಂದ 20ರವರೆಗೆ ಹಾಗೂ ಮಾ.2ರಿಂದ 31ರವರೆಗೆ ಒಟ್ಟು 25 ದಿನ ವಿಧಾನಸಭೆ ಕಲಾಪ ನಡೆಯಲಿದೆ. ಮಾ.2, 3ರಂದು ಸಂವಿಧಾನದ ಆಶಯ ಕುರಿತು ವಿಶೇಷ ಚರ್ಚೆ ನಡೆಯಲಿದೆ. ಮಾ.5ಕ್ಕೆ ಹಣಕಾಸು ಖಾತೆ ಹೊಂದಿರುವ ಸಿಎಂ ಯಡಿಯೂರಪ್ಪ ಬಜೆಟ್ ಮಂಡಿಸಲಿದ್ದಾರೆ.**



## ವಿಪಕ್ಷಗಳ ಪ್ರಶ್ನೆಗೆ ಅಧಿವೇಶನದಲ್ಲೇ ಉತ್ತರ

**ದಾವಣಗೆರೆ:** ಫೆ.17ರಿಂದ ಪ್ರಾರಂಭವಾಗುವ ಅಧಿವೇಶನದಲ್ಲಿ ರಾಜ್ಯದ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದಂತೆ ಅನೇಕ ವಿಚಾರಗಳ ಪ್ರಸ್ತಾವನೆ ಆಗಲಿದೆ. ಸಿಎಂ ಯಡಿಯೂರಪ್ಪ ಅವರು ಅಧಿವೇಶನದಲ್ಲಿ ರಾಜ್ಯದ ಜನತೆಯ ಕಲ್ಯಾಣಕ್ಕಾಗಿ ಕೆಲ ಸೂಕ್ತ ನಿರ್ಧಾರ ಕೈಗೊಳ್ಳುತ್ತಾರೆ ಎಂದು ಆರೋಗ್ಯ ಸಚಿವ ಬಿ.ಶ್ರೀರಾಮುಲು ತಿಳಿಸಿದ್ದಾರೆ.

ಭಾನುವಾರ ಸುದ್ದಿಗಾರರ ಜೊತೆ ಮಾತನಾಡಿ, ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಜನರಿಗೆ ಅನುಕೂಲ ಆಗುವ ಏನೇನು ಕಾರ್ಯಕ್ರಮ ಮಾಡಿದೆ. ಮುಂದೆ ಏನೇನು ಅನುಕೂಲ ಆಗಬೇಕು ಎಂಬ ವಿಚಾರಗಳ ಪ್ರಸ್ತಾಪನೆ ಮಾಡಲಾಗುವುದು. ಅಧಿವೇಶನದ ಪ್ರಮುಖ ಉದ್ದೇಶ ರಾಜ್ಯದ ಜನರಿಗೆ ಸದುಪಯೋಗ, ಅನುಕೂಲ ಆಗಬೇಕು ಎಂಬುದು. ರಾಜ್ಯದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲಾಗುವುದು. ವಿಪಕ್ಷಗಳ ಪ್ರಶ್ನೆಗಳಿಗೆ ಅಧಿವೇಶನದಲ್ಲಿ ಸರ್ಕಾರ ಉತ್ತರ ಕೊಡಲಿದೆ. ಅಧಿವೇಶನ ಮುಗಿದ ನಂತರ ಕೆಲವು ಜಿಲ್ಲೆಗಳ ಉಸ್ತುವಾರಿ ಸಚಿವರ ನೇಮಕ ಆಗಲಿದೆ. ನಮ್ಮಲ್ಲಿ ಮೂಲ ಬಿಜೆಪಿ, ಬೇರೆ ಪಕ್ಷಗಳಿಂದ ಬಂದವರು ಎಂಬುದು ಇಲ್ಲ, ನಾವೆಲ್ಲರೂ ಒಗ್ಗಟ್ಟಾಗಿದ್ದೇವೆ ಎಂದರು.

> **ಮುಖ್ಯಮಂತ್ರಿ ಯಡಿಯೂರಪ್ಪ ಅವರ ಪುತ್ರ ವಿಜಯೇಂದ್ರ ಅವರು ನನ್ನ ಇಲಾಖೆ ಸೇರಿದಂತೆ ಯಾವುದೇ ಇಲಾಖೆಗಳಲ್ಲಿ ಹಸ್ತಕ್ಷೇಪ ಮಾಡುತ್ತಿಲ್ಲ. ಕಾಂಗ್ರೆಸ್‌ನವರು ಇಂತಹ ಸುಳ್ಳು ಸುದ್ದಿ ಹಬ್ಬಿಸುತ್ತಿದ್ದಾರೆ.**
>
> **• ಬಿ.ಶ್ರೀರಾಮುಲು, ಆರೋಗ್ಯ ಸಚಿವ**

ನಾಗರಿಕ ಪೌರತ್ವ ತಿದ್ದುಪಡಿ ಕಾಯ್ದೆ ಕುರಿತಂತೆ ಸರ್ಕಾರ ಸ್ಪಷ್ಟವಾಗಿದೆ. ಕೆಲವು ಕಿಡಿಗೇಡಿಗಳು ಈ ರೀತಿ ಮಾಡಿದಾಗ ಕಾನೂನು ಕ್ರಮ ತೆಗೆದುಕೊಳ್ಳಬೇಕಾಗುತ್ತದೆ. ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಕಾನೂನು ಬಗ್ಗೆ ಗೌರವಯುತವಾಗಿ ನಡೆದುಕೊಳ್ಳಬೇಕು. ಸರ್ಕಾರದ ನಿರ್ಧಾರ ಸೂಕ್ತವಾಗಿದೆ ಎಂದರು.

### ವಿಧಾನಸಭೆಯಲ್ಲಿ ಮಂಡನೆಗೆ ಬಾಕಿಯಿರುವ ವಿಧೇಯಕಗಳು

1. ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ, 2020
2. ಕರ್ನಾಟಕ ನಾವೀನ್ಯತಾ ಪ್ರಾಧಿಕಾರ ವಿಧೇಯಕ, 2020
3. ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ವಿಧೇಯಕ, 2020
4. ಕರ್ನಾಟಕ ರಾಜಭಾಷಾ (ತಿದ್ದುಪಡಿ) ವಿಧೇಯಕ, 2020
5. ಕರ್ನಾಟಕ ನಗರ ಪಾಲಿಕೆಗಳ (ತಿದ್ದುಪಡಿ) ವಿಧೇಯಕ, 2020
6. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2020, ಪರ್ಯಾಲೋಚನೆ, ಅಂಗೀಕಾರಕ್ಕೆ ಬಾಕಿ ಇರುವ ವಿಧೇಯಕ
7. ಕರ್ನಾಟಕ ಅನುಸೂಚಿತ ಜಾತಿ, ಅನುಸೂಚಿತ ಬುಡಕಟ್ಟು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ, 2018.

### ಸಿದ್ದು ಅವರದ್ದೇ ನೇತೃತ್ವ

ಪ್ರಸಕ್ತ ಅಧಿವೇಶನದಲ್ಲಿ ಸಿದ್ದರಾಮಯ್ಯ ಅವರೇ ಪ್ರತಿಪಕ್ಷ ನಾಯಕ ಹಾಗೂ ಶಾಸಕಾಂಗ ಪಕ್ಷದ ನಾಯಕರಾಗಿರಲಿದ್ದಾರೆ. ಅಧಿವೇಶನಕ್ಕೆ ಮುಂಚೆ ಬದಲಾವಣೆಯಾಗಲಿದೆ ಎಂಬ ಮಾತುಗಳು ಕೇಳಿಬಂದಿದ್ದವಾದರೂ ಇದುವರೆಗೂ ಆ ಕುರಿತು ಹೈಕಮಾಂಡ್‌ನಿಂದ ಯಾವುದೇ ಸೂಚನೆ ಸಿಕ್ಕಿಲ್ಲ. ಹೀಗಾಗಿ, ಯಥಾಸ್ಥಿತಿ ಮುಂದುವರಿಯಬಹುದು ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.